# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **316**
ಸದಸ್ಯರ ಹೆಸರು :ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : **21.12.2022.**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ನಿಯಮ 97(1) ರನ್ವಯ ಜಾನುವಾರುಗಳಿಗೆ ಆದೇಶ ಹೊರಡಿಸಿರುವುದು ನಿಜವೇ; (ಆದೇಶದ ಪ್ರತಿಯನ್ನು ಒದಗಿಸುವುದು) | ಕರ್ನಾಟಕ ಭೂ ಕಂದಾಯ ನಿಯಮಗಳು, 1966 ರ ನಿಯಮ 97(1) ರನ್ವಯ ಪ್ರತಿ 100 ಜಾನುವಾರುಗಳಿಗೆ 12 ಹೆಕ್ಟೇರುಗಳಂತೆ ಪ್ರತಿಯೊಂದು ಗ್ರಾಮದ ಜಾನುವಾರುಗಳಿಗೆ ಸರ್ಕಾರಿ ಭೂಮಿಯನ್ನು ಗೋಮಾಳವಾಗಿ ಪ್ರತ್ಯೇಕವಾಗಿಡಲು ಅವಕಾಶ ಕಲ್ಪಿಸಿ, ಸುತ್ತೋಲೆ ಹೊರಡಿಸಲಾಗಿದ್ದು, ವಿವರಗಳನ್ನು **ಅನುಬಂಧ-1ರ**ಲ್ಲಿ ಒದಗಿಸಲಾಗಿದೆ. |
| ಆ) | ಸದರಿ ಸುತ್ತೋಲೆಯ ಅನುಸಾರ ಪ್ರತಿ ತಾಲ್ಲೂಕುಗಳಲ್ಲಿ ಗೋಮಾಳ ಜಮೀನನ್ನು ಕಾಯ್ದಿರಿಸಲಾಗಿದೆಯೇ; ಹಾಗಿದ್ದಲ್ಲಿ, ತಾಲ್ಲೂಕುವಾರು ಕಾಯ್ದಿರಿಸಿರುವ ಗೋಮಾಳ ಜಮೀನಿನ ವಿವರ ನಿಡುವುದು; (ಬಳ್ಳಾರಿ, ವಿಜಯನಗರ ಮತ್ತು ಹಾಸನ ಜಿಲ್ಲೆಗಳ ಮಾಹಿತಿಯನ್ನು ನೀಡುವುದು) | ಅನುಬಂಧ-2ರಲ್ಲಿ ಒದಗಿಸಲಾಗಿದೆ. |
| ಇ) | ಜಾನುವಾರುಗಳಿಗೆ ಹುಲ್ಲು ಗಾವಲುಗಳನ್ನು ಕಾಯ್ದಿರಿಸದೆ ಗೋಮಾಳ ಜಮೀನುಗಳನ್ನು ಬಗರ್ ಹುಕುಂ ಪ್ರಕರಣದಡಿಯಲ್ಲಿ ಮಂಜೂರು ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕಠಿಣ ಕ್ರಮಗಳೇನು; (ಮಾಹಿತಿ ನೀಡುವುದು) | ಜಿಲ್ಲಾಧಿಕಾರಿಗಳು, ನಿಯಮ 97(1)ರಂತೆ ನಿಗದಿತ ವಿಸ್ತೀರ್ಣದ ಗೋಮಾಳವನ್ನು ನಿಗದಿಪಡಿಸಿದ ನಂತರ ಅಂತಹ ಭೂಮಿಯು ಉಚಿತ ಮೇವನ್ನು ಒದಗಿಸಲು ಲಭ್ಯವಿಲ್ಲದಿದ್ದಾಗ್ಯೂ ಅಥವಾ ಸಾಕಷ್ಟು ಇಲ್ಲದಿದ್ದಾಗ್ಯೂ ಅಂತಹ ಸಕ್ರಮವನ್ನು ನಿಯಮ 97-4(ಎ)ರನ್ವಯ ಒಂದು ಬಾರಿ ಕ್ರಮದ ಆಧಾರದ ಮೇಲೆ ಸಕ್ರಮಗೊಳಿಸುವ ಉದ್ದೇಶಗಳಿಗಾಗಿ ಅಂದರೆ ನಮೂನೆ 50 ಮತ್ತು 53ರಲ್ಲಿ ಬಾಕಿ ಇರುವ ಅರ್ಜಿಗಳಿಗೆ ಪರಿಗಣಿಸಬಹುದಾಗಿದೆ. ಆದರೆ, ಈ ವಿನಾಯಿತಿಯು ನಮೂನೆ-57ರ ಅರ್ಜಿಗೆ ಅನ್ವಯಿಸುವುದಿಲ್ಲ. ಅಂದರೆ, ಜಿಲ್ಲಾಧಿಕಾರಿಗಳು ನಿಗಧಿತ ಗೋಮಾಳವನ್ನು ನಿಗದಿಪಡಿಸಿದ ನಂತರ ಹೆಚ್ಚುವರಿ ಗೋಮಾಳ ಲಭ್ಯವಿದ್ದಲ್ಲಿ ನಮೂನೆ-57ರ ಅರ್ಜಿಗಳನ್ನು ಪರಿಗಣಿಸಲು ಅವಕಾಶವಿರುತ್ತದೆ. |
| ಈ) | ಕರ್ನಾಟಕ ಭೂ ಕಂದಾಯ ನಿಯಮಗಳು 1996ರ ನಿಯಮ 71ರ ಅನುಸಾರ ವಿಶೇಷ ಪ್ರಕರಣಗಳಿಗೆ ಕಾಯ್ದಿರಿಸಿರುವ ಗೋಮಾಳ ಜಮೀನನ್ನು ಹಿಂಪಡೆದು ಜಾನುವಾರುಗಳ ಹುಲ್ಲುಗಾವಲಿಗಾಗಿ ಕಾಯ್ದಿರಿಸಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು) | ಭೂ ಕಂದಾಯ ಕಾಯ್ದೆ, 1964 ಕಲಂ 71ರಡಿ ಗೋಮಾಳ ಉಪಯೋಗಕ್ಕೆ ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿದೆ. ಕಾಯ್ದಿರಿಸಲಾಗಿರುವ ಉದ್ದೇಶಗಳಿಗೆ ಸದರಿ ಗೋಮಾಳ ಜಮೀನು ಅಗತ್ಯವಿಲ್ಲದೇ ಇರುವುದು ಕಂಡುಬಂದಲ್ಲಿ, ಅಂತಹ ಜಮೀನನ್ನು ಗೋಮಾಳವನ್ನಾಗಿ ಉಳಿಸಿಕೊಳ್ಳಲು ಯಾವುದೇ ತೊಡಕುಗಳಿರುವುದಿಲ್ಲ. |

ಸಂಖ್ಯೆ: ಆರ್‌ಡಿ 258 ಎಲ್‌ಜಿಕ್ಯೂ 2022

(**ಆರ್. ಅಶೋಕ**)
ಕಂದಾಯ ಸಚಿವರು

# ಕರ್ನಾಟಕ ಸರ್ಕಾರ

**ಸಂಖ್ಯೆ:** ಆರ್‌ಡಿ 02 ಎಲ್‌ಜಿಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.02.2022.

## ಸುತ್ತೋಲೆ

**ವಿಷಯ:** ಕರ್ನಾಟಕ ಭೂ ಕಂದಾಯ ನಿಯಮಗಳು, 1966 ರ ನಿಯಮ 97(1) ರನ್ವಯ ಗೋಮಾಳ ಜಮೀನನ್ನು ನಿಗದಿಪಡಿಸುವ ಬಗ್ಗೆ.

***

ಗೋಮಾಳ ಜಮೀನನ್ನು ಮಂಜೂರು ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:1353/2006ರ ಪ್ರಕರಣದಲ್ಲಿ ದಿನಾಂಕ:18.11.2006ರಂದು ನೀಡಿದ್ದ ತೀರ್ಪಿನ ಮುಖ್ಯ ಅಂಶಗಳು ಈ ಕೆಳಕಂಡಂತಿವೆ.

iv) The Deputy Commissioners in the State are directed to identify all the Gomal and other reserved lands, consider whether their extent have to be retained or reduced or totally diverted to other purposes based upon the cattle population and the requirement which the reservation made still exists in the concerned areas;

v) If any gomal land or other reserved lands is not required on the changed circumstances an account of subsequent events, de-reserve the same for consideration of regularisation under Section 94A, 94B and 94C of the Act keeping in view the eligibility of unauthorised occupants for regularisation of their occupation in the respective areas of the State;

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅಪೀಲು ಸಂಖ್ಯೆ:1353/2006ರ ಪ್ರಕರಣದಲ್ಲಿ ದಿನಾಂಕ:18.11.2006ರಂದು ನೀಡಿದ್ದ ತೀರ್ಪಿನ ಹಿನ್ನೆಲೆಯಲ್ಲಿ, ಗೋಮಾಳ ವಿಸ್ತೀರ್ಣದ ಕುರಿತಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 83 ಎಲ್.ಜಿ.ಪಿ 2006, ದಿನಾಂಕ:05.01.2007ರ ಸುತ್ತೋಲೆಯನ್ನು ಹೊರಡಿಸಲಾಗಿತ್ತು.

ಪ್ರಸ್ತುತ, ಅನೇಕ ಜಿಲ್ಲಾಧಿಕಾರಿಗಳು ಗೋಮಾಳ ವಿಸ್ತೀರ್ಣವನ್ನು ನಿಗದಿಪಡಿಸುವ ಬಗ್ಗೆ ಸ್ಪಷ್ಟೀಕರಣವನ್ನು ಕೋರಿರುವ ಹಿನ್ನೆಲೆಯಲ್ಲಿ, ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್ ಡಿ 83 ಎಲ್ ಜಿಪಿ 2006, ದಿನಾಂಕ:05.01.2007ರ ಸುತ್ತೋಲೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ನೀಡಲಾಗಿರುವ ನಿರ್ದೇಶನಗಳನ್ನು ಹಿಂಪಡೆದು, ಈ ಕೆಳಕಂಡಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

1. ಕರ್ನಾಟಕ ಭೂ ಕಂದಾಯ ನಿಯಮಗಳು, 1966 ರ ನಿಯಮ 97(4) ರನ್ವಯ ಯಾವುದೇ ಗ್ರಾಮದಲ್ಲಿ ಉಚಿತ ಗೋಮಾಳವನ್ನು ಪ್ರತ್ಯೇಕವಾಗಿಡುವುದರಲ್ಲಿ ಆವಶ್ಯಕವಾದ ಭೂಮಿಯ ವಿಸ್ತೀರ್ಣವನ್ನು ಜಿಲ್ಲಾಧಿಕಾರಿಗಳು ನಿರ್ಧರಿಸತಕ್ಕದ್ದು;

2. ಕರ್ನಾಟಕ ಭೂ ಕಂದಾಯ ನಿಯಮಗಳು, 1966 ರ ನಿಯಮ 97(1) ರನ್ವಯ ಪ್ರತಿ 100 ಜಾನುವಾರುಗಳಿಗೆ 12 ಹೆಕ್ಟೇರುಗಳಂತೆ ಪ್ರತಿಯೊಂದು ಗ್ರಾಮದ ಜಾನುವಾರುಗಳಿಗೆ ಸರ್ಕಾರಿ ಭೂಮಿಯನ್ನು ಗೋಮಾಳವಾಗಿ ಪ್ರತ್ಯೇಕವಾಗಿ ಕಾಯ್ದಿರಿಸತಕ್ಕದ್ದು ಹಾಗೂ ಎಲ್ಲಾ ಜಿಲ್ಲಾಧಿಕಾರಿಗಳು ಪ್ರತಿಯೊಂದು ಗ್ರಾಮದಲ್ಲಿ ಪ್ರಸ್ತುತ ಇರುವ ಪರಿಸ್ಥಿತಿ ಹಾಗೂ ಸನ್ನಿವೇಶಗಳಿಗನುವಾಗಿ ಕಾಲಕಾಲಕ್ಕೆ ಗೋಮಾಳದ ವಿಸ್ತೀರ್ಣವನ್ನು ನಿಯಮ 97(1)ರನ್ವಯ ನಿರ್ಧರಿಸತಕ್ಕದ್ದು;

---2

3. ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ನಿಯಮ 97(1)ಗಿಂತ ಹೆಚ್ಚಾಗಿ ಪ್ರತ್ಯೇಕವಾಗಿಡಲಾಗಿರುವ ಗೋಮಾಳ ಜಮೀನು ಅವಶ್ಯಕತೆ ಇದೆಯೇ ಎಂಬುದರ ಬಗ್ಗೆ ಪರಿಶೀಲಿಸಿ, ಅವಶ್ಯಕತೆ ಇದ್ದಲ್ಲಿ ಹಾಗೆಯೇ ಹೆಚ್ಚಾಗಿ ಕಾಯ್ದಿರಿಸತಕ್ಕದ್ದು. ಒಂದು ವೇಳೆ ಜಿಲ್ಲಾಧಿಕಾರಿಗಳು ಈಗಾಗಲೇ ಪ್ರತ್ಯೇಕವಾಗಿಡಲಾಗಿರುವ ಪ್ರದೇಶವು ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಅವಶ್ಯಕವಾಗಿರುವುದಕ್ಕಿಂತ ಬಹಳ ಹೆಚ್ಚಾಗಿದೆಯೆಂದು ಅಭಿಪ್ರಾಯಪಟ್ಟರೇ ಅದನ್ನು ನಿಯಮ 97(1)ರಡಿ ನಿಯಮಿಸಿದ ಕನಿಷ್ಠ ಪ್ರಮಾಣಕ್ಕೆ ಇಳಿಸಬಹುದು;

4. ಕರ್ನಾಟಕ ಭೂ ಕಂದಾಯ ನಿಯಮಗಳು, 1966 ರ ನಿಯಮ 97(2) ರನ್ವಯ ಸಂಬಂಧಪಟ್ಟ ಗ್ರಾಮದಲ್ಲಿ ಅಥವಾ ಪಕ್ಕದ ಗ್ರಾಮದಲ್ಲಿ ಗ್ರಾಮದ ಜಾನುವಾರು ಮೇಯುವುದಕ್ಕೆ ಅನುಕೂಲವಾಗುವಂತೆ ಸಾಕಷ್ಟು ಅರಣ್ಯ ಪ್ರದೇಶವಿದ್ದರೇ, ಅದರ ವಿಸ್ತೀರ್ಣಕ್ಕನುಗುಣವಾಗಿ ಉಚಿತ ಗೋಮಾಳವಾಗಿ ಪ್ರತ್ಯೇಕವಾಗಿ ಇದೆಯೆಂದು ಪ್ರದೇಶದ ವಿಸ್ತೀರ್ಣವನ್ನು ಕಡಿಮೆ ಮಾಡಬಹುದು;

5. ಸದರಿ ನಿಯಮ 97(3) ರನ್ವಯ ಗ್ರಾಮದಲ್ಲಿ ಯಾವ ಗೋಮಾಳವು ಇಲ್ಲದಿದ್ದರೆ ಅಥವಾ ಇರುವ ಭೂಮಿಯು 97(1)ರನ್ವಯ ನಿಯಮಿಸಿದ ವಿಸ್ತೀರ್ಣಕ್ಕಿಂತ ಕಡಿಮೆಯಾಗಿದ್ದರೆ, ಪಕ್ಕದ ಗ್ರಾಮದಲ್ಲಿ ದೊರೆಯುವ ಸರ್ಕಾರಿ ಭೂಮಿಯನ್ನು ಗೋಮಾಳವಾಗಿ ಪ್ರತ್ಯೇಕವಾಗಿಡುವುದರ ಮೂಲಕ ಆ ಕೊರತೆಯನ್ನು ತುಂಬಬಹುದು;

6. ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ನಿಯಮ 97(4)ರನ್ವಯ ಜಿಲ್ಲಾಧಿಕಾರಿಗಳು ಗ್ರಾಮದಲ್ಲಿ ಪ್ರಸ್ತುತ ಇರುವ ಪರಿಸ್ಥಿತಿ ಹಾಗೂ ಸನ್ನಿವೇಶಗಳಿಗನುಸಾರವಾಗಿ ಗೋಮಾಳದ ಅವಶ್ಯಕತೆಯನ್ನು ನಿಯಮ 97(1)ರಂತೆ ನಿಗಧಿಪಡಿಸಿದ ವಿಸ್ತೀರ್ಣಕ್ಕಿಂತ ಕಡಿಮೆ ಮಾಡಬಹುದು ಮತ್ತು ಈ ಕೆಳಕಂಡ ಉದ್ದೇಶಗಳಿಗೆ ಪ್ರಾದೇಶಿಕ ಆಯುಕ್ತರ ಪೂರ್ವಾನುಮತಿ ಅವಶ್ಯಕತೆ ಇರುವುದಿಲ್ಲ.

   i. ನಿವೇಶನ ರಹಿತ ವ್ಯಕ್ತಿಗೆ ಮನೆ ನಿವೇಶನಗಳ ಉದ್ದೇಶಕ್ಕಾಗಿ; ಮತ್ತು
   ii. ವ್ಯವಸಾಯದ ಉದ್ದೇಶಗಳಿಗಾಗಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಭೂಮಿಯ ಮಂಜೂರಾತಿ
   iii. ಅಧ್ಯಾಯ XIII-ಎ ಯ ಮೇರೆಗೆ ಅನಧಿಕೃತ ಸಾಗುವಳಿಯ ಸಕ್ರಮಗೊಳಿಸುವಿಕೆ
   iv. ಅಂಥ ಗ್ರಾಮದ ನಿವಾಸಿಗಳ ಸ್ಮಶಾನಕ್ಕಾಗಿ ಭೂಮಿಯ ಮೀಸಲಾತಿ ಸರ್ಕಾರದ ವಿವಿಧ ಉದ್ದೇಶಗಳಿಗಾಗಿ ಭೂಮಿಯನ್ನು ಮಂಜೂರು ಮಾಡುವುದು ಅಥವಾ ಕಾಯ್ದಿರಿಸುವುದು ಅಂದರೆ, ಸರ್ಕಾರಿ ಶಾಲೆಗಳು, ಕಾಲೇಜುಗಳು, ವಸತಿ ಶಾಲೆಗಳು, ಹಾಸ್ಟೆಲ್‌ಗಳು, ಆಸ್ಪತ್ರೆಗಳು, ಪಶುವೈದ್ಯಕೀಯ ಆಸ್ಪತ್ರೆಗಳು, ಅಂಗನವಾಡಿ, ಕರ್ನಾಟಕ ವಿದ್ಯುಚ್ಛಕ್ತಿ ಪ್ರಸರಣ ನಿಗಮ ನಿಯಮಿತದ ಉಪ ಸ್ಟೇಷನ್‌ಗಳು (ಕೆಪಿಟಿಸಿಎಲ್) ಮತ್ತು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ)ದ ಬಸ್ ಡಿಪೋ

ಈ ಮೇಲ್ಕಂಡ ಉದ್ದೇಶಗಳನ್ನು ಹೊರತುಪಡಿಸಿ, ನಿಯಮ 97(1)ರಲ್ಲಿ ನಿಗಧಿಪಡಿಸಿರುವ ವಿಸ್ತೀರ್ಣವನ್ನು ಕಡಿಮೆ ಮಾಡಬೇಕಾದ್ದಲ್ಲಿ, ಪ್ರಾದೇಶಿಕ ಆಯುಕ್ತರ ಪೂರ್ವಾನುಮತಿ ಪಡೆಯುವುದು ಅವಶ್ಯವಾಗಿರುತ್ತದೆ.

7. ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ಅಧ್ಯಾಯ-XIII-ಎ ಭೂಮಿಯ ಅನಧಿಕೃತ ಅಧಿಭೋಗವನ್ನು ಸಕ್ರಮಗೊಳಿಸುವುದಕ್ಕೆ ಸಂಬಂಧಿಸಿದಂತೆ ನಮೂನೆ 50, 53 ಮತ್ತು 57

---3

ಅರ್ಜಿಗಳು ಒಳಪಡುತ್ತದೆ. ಜಿಲ್ಲಾಧಿಕಾರಿಗಳು ನಿಯಮ 97(1)ರಂತೆ ನಿಗಧಿತ ವಿಸ್ತೀರ್ಣದ ಗೋಮಾಳವನ್ನು ನಿಗಧಿಪಡಿಸಿದ ನಂತರ ಹೆಚ್ಚುವರಿ ಗೋಮಾಳವನ್ನು ನಮೂನೆ-50, 53 ಮತ್ತು 57 ಅರ್ಜಿಗಳನ್ನು ಸಲ್ಲಿಸಿದ ಅನಧಿಕೃತ ಸಾಗುವಳಿದಾರರಿಗೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರನ್ವಯ ಮಂಜೂರು ಮಾಡಬಹುದಾಗಿದೆ.

8. **ಈ ಮೇಲೆ ತಿಳಿಸಿರುವಂತೆ ಜಿಲ್ಲಾಧಿಕಾರಿಗಳು ಉಚಿತ ಗೋಮಾಳದ ವಿಸ್ತೀರ್ಣವನ್ನು ನಿಗದಿಪಡಿಸಿದ ನಂತರವೂ ಅಂತಹ ಭೂಮಿಯು ಉಚಿತ ಮೇವನ್ನು ಒದಗಿಸಲು ಲಭ್ಯವಿಲ್ಲದಿದ್ದಾಗ್ಯೂ ಅಥವಾ ಸಾಕಷ್ಟು ಇಲ್ಲದಿದ್ದಾಗ್ಯೂ ಸಹ ಅಂತಹ ಸಕ್ರಮವನ್ನು ನಿಯಮ 97(4-ಎ)ರನ್ವಯ ಒಂದು ಬಾರಿಯ ಕ್ರಮದ ಆಧಾರದ ಮೇಲೆ ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ಅಧ್ಯಾಯ-XIII-ಎ ಅನಧಿಕೃತ ಕೃಷಿಯನ್ನು ಸಕ್ರಮಗೊಳಿಸುವ ಉದ್ದೇಶಗಳಿಗಾಗಿ ಅಂದರೆ ನಮೂನೆ-50 ಮತ್ತು ನಮೂನೆ-53ರಲ್ಲಿ ಬಾಕಿ ಇರುವ ಅರ್ಜಿಗಳಿಗೆ ಪರಿಗಣಿಸಬಹುದಾಗಿದೆ. ಆದರೆ, ಈ ವಿನಾಯ್ತಿಯು ನಮೂನೆ-57 ಅರ್ಜಿಗಳಿಗೆ ಅನ್ವಯಿಸುವುದಿಲ್ಲ. ಅಂದರೆ ಜಿಲ್ಲಾಧಿಕಾರಿಗಳು ನಿಗಧಿತ ಗೋಮಾಳವನ್ನು ನಿಗಧಿಪಡಿಸಿದ ನಂತರ ಹೆಚ್ಚುವರಿ ಗೋಮಾಳ ಲಭ್ಯವಿದ್ದಲ್ಲಿ ನಮೂನೆ-57ರ ಅರ್ಜಿಗಳನ್ನು ಪರಿಗಣಿಸಲು ಅವಕಾಶವಿರುತ್ತದೆ ಮತ್ತು ನಿಯಮ 97(1)ರನ್ವಯ ಗೋಮಾಳದ ವಿಸ್ತೀರ್ಣ ಕಡಿಮೆ ಇದ್ದಲ್ಲಿ ನಮೂನೆ 57ರ ಅರ್ಜಿಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ.**

C. Balaram
**(ಸಿ. ಬಲರಾಮ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-1).
24/02/2022

**ಇವರಿಗೆ:**

1. ಎಲ್ಲಾ ಪ್ರಾದೇಶಿಕ ಆಯುಕ್ತರು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಆಯುಕ್ತರು, ಭೂಮಾಪನ ಇಲಾಖೆ & ಪದನಿಮಿತ್ತ ನಿರ್ದೇಶಕರು, ಭೂಮಿ ಉಸ್ತುವಾರಿ ಕೋಶ.
4. ಎಲ್ಲಾ ಉಪ ವಿಭಾಗಾಧಿಕಾರಿಗಳು (ಜಿಲ್ಲಾಧಿಕಾರಿಗಳ ಮುಖಾಂತರ).
5. ಎಲ್ಲಾ ತಹಶೀಲ್ದಾರುಗಳು (ಜಿಲ್ಲಾಧಿಕಾರಿಗಳ ಮುಖಾಂತರ).

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕಿ, ಕಂದಾಯ ಇಲಾಖೆ (ಭೂ ಮಂಜೂರಾತಿ & ಭೂ ಸುಧಾರಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಮಂಜೂರಾತಿ-3).
4. ಪೀಠಾಧಿಕಾರಿ, ಕಂದಾಯ ಇಲಾಖೆ (ಭೂ ಮಂಜೂರಾತಿ-2).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.



Generated from eOffice by SYED ABBAS HYDER, RD-SR-LG1(SAH), SENIOR ASSISTANT, REVENUE DEPATMENT SEC on 16/11/2022 01:14 PM

# ಅನುಬಂಧ:2

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ವಿಸ್ತೀರ್ಣ ಎಕರೆ/ಗುಂಟೆ |
|---|---|---|---|
| 1 | ಬಳ್ಳಾರಿ | ಸಂಡೂರು | 16.92 |
| 2 | | ಸಿರಗುಪ್ಪ | 4.71 |
| 3 | | ಕಂಪ್ಲಿ | 27.67 |
| 1 | ವಿಜಯನಗರ | ಹಗರಿಬೊಮ್ಮನಹಳ್ಳಿ | 74.35 |
| 2 | | ಕೂಡ್ಲಿಗಿ | 3.85 |
| 1 | ಹಾಸನ | ಅರಕಲಗೂಡು | 7278-37 |
| 2 | | ಆಲೂರು | 5029-08 |
| 3 | | ಬೇಲೂರು | 3929-27 |
| 4 | | ಸಕಲೇಶಪುರ | 5158-00 |
| 5 | | ಅರಸೀಕೆರೆ | 4330-00 |
| 6 | | ಚನ್ನರಾಯಪಟ್ಟಣ | 3493-30 |
| 7 | | ಹೊಳೆನರಸೀಪುರ | 4860-00 |
| 8 | | ಹಾಸನ | 3446-00 |